**All India Radio: Bangalore**
**National Bulletin In Kannada**
**01.03.2026 1.10 p.m.**

ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

**01.03.2026 1.10 p.m.**

**<><><><>**

ಮುಖ್ಯಾಂಶಗಳು

1. ಪುದುಚೇರಿಯಲ್ಲಿ ೨ ಸಾವಿರದ ೭೦೦ ಕೋಟಿ ರೂಪಾಯಿ ಮೌಲ್ಯದ ಬಹು ಅಭಿವೃದ್ಧಿ ಯೋಜನೆಗಳಿಗೆ ಚಾಲನೆ ನೀಡಿದ ಪ್ರಧಾನಿ ನರೇಂದ್ರ ಮೋದಿ
2. ಇಸ್ರೇಲ್ - ಇರಾನ್ ನಡುವಿನ ಉದ್ವಿಗ್ನತೆ; ಇಂದು ೪೪೪ ವಿಮಾನಗಳ ಹಾರಾಟ ರದ್ದಾಗುವ ನಿರೀಕ್ಷೆ - ನಾಗರಿಕ ವಿಮಾನಯಾನ ಸಚಿವಾಲಯ
3. ಮಧ್ಯಪ್ರಾಚ್ಯದಲ್ಲಿನ ಬಿಕ್ಕಟಿನ ಪರಿಸ್ಥಿತಿ; ಭಾರತದ ರಾಯಭಾರ ಕಚೇರಿ ಹೊರಡಿಸಿರುವ ಮಾರ್ಗಸೂಚಿ ಪಾಲಿಸುವಂತೆ ಭಾರತೀಯ ಪ್ರಜೆಗಳಿಗೆ ಸೂಚನೆ
4. ನಾಗ್ಪುರ ಕಾರ್ಖಾನೆಯಲ್ಲಿ ಭಾರಿ ಸ್ಫೋಟ; ಕನಿಷ್ಠ ೧೭ ಮಂದಿ ಸಾವು; ಪ್ರಧಾನಮಂತ್ರಿ ಪರಿಹಾರ ನಿಧಿಯಿಂದ ಮೃತರ ಕುಟುಂಬಕ್ಕೆ ೨ ಲಕ್ಷ ರೂಪಾಯಿ ಪರಿಹಾರ ಘೋಷಣೆ
5. ಐಸಿಸಿ ಟಿ-೨೦ ವಿಶ್ವಕಪ್ ಕ್ರಿಕೆಟ್; ಸೂಪರ್ ೮ ರ ಪಂದ್ಯದಲ್ಲಿಂದು ಭಾರತ - ವೆಸ್ಟ್ ಇಂಡೀಸ್ ಮುಖಾಮುಖಿ

<><><><>

ಪ್ರಧಾನಿ ನರೇಂದ್ರ ಮೋದಿ ಇಂದು ಪುದುಚೇರಿಯಲ್ಲಿ ೨ ಸಾವಿರದ ೭೦೦ ಕೋಟಿ ರೂಪಾಯಿ ಮೌಲ್ಯದ ಬಹು ಅಭಿವೃದ್ಧಿ ಯೋಜನೆಗಳಿಗೆ ಚಾಲನೆ ನೀಡಿದರು. ಬಳಿಕ ಸಭೆಯನ್ನುದ್ದೇಶಿಸಿ ಪ್ರಧಾನಿ ಮಾತನಾಡಿದರು.

**ಧ್ವನಿ: ಪ್ರಧಾನಿ ನರೇಂದ್ರ ಮೋದಿ (೩೦ ಸೆಕೆಂಡ್ಸ್ )**

ನಂತರ, ಪ್ರಧಾನಿಯವರು ಮಧ್ಯಾಹ್ನ ತಮಿಳುನಾಡಿನ ಮಧುರೈಗೆ ಪ್ರಯಾಣಿಸಲಿದ್ದಾರೆ. ಮಧುರೈನಲ್ಲಿ, ಅವರು, ೪ ಸಾವಿರದ ೪೦೦ ಕೋಟಿ ರೂಪಾಯಿಗಳಿಗೂ ಹೆಚ್ಚು ಮೌಲ್ಯದ ಮೂಲಸೌಕರ್ಯ ಯೋಜನೆಗಳ ಉದ್ಘಾಟನೆ, ಲೋಕಾರ್ಪಣೆ ಮತ್ತು ಶಂಕುಸ್ಥಾಪನೆ ನೆರವೇರಿಸಲಿದ್ದಾರೆ. ತಮಿಳುನಾಡಿನಲ್ಲಿ ಪ್ರಸಾರ ಸೇವೆಗಳನ್ನು ಮತ್ತಷ್ಟು ಬಲಪಡಿಸುವ ನಿಟ್ಟಿನಲ್ಲಿ

ಪ್ರಧಾನಿ ನರೇಂದ್ರ ಮೋದಿ ಅವರು, ಕುಂಭಕೋಣಂ, ಯೆರ್ಕಾಡ್ ಮತ್ತು ವೆಲ್ಲೂರಿನಲ್ಲಿ ಮೂರು ಹೊಸ ಆಕಾಶವಾಣಿ ಎಫ್‌ಎಂ ರಿಲೇ ಟ್ರಾನ್ಸ್‌ಮಿಟರ್‌ಗಳನ್ನು ಉದ್ಘಾಟಿಸಲಿದ್ದಾರೆ. ಈ ಟ್ರಾನ್ಸ್‌ಮಿಟರ್‌ಗಳು ಪ್ರಾದೇಶಿಕ ವ್ಯಾಪ್ತಿಯನ್ನು ವಿಸ್ತರಿಸಿ ನಿರಂತರ ಎಫ್‌ಎಂ ಪ್ರಸಾರವನ್ನು ಖಚಿತಪಡಿಸುತ್ತವೆ. ರಾಜ್ಯದ ಬಹು ಜಿಲ್ಲೆಗಳಲ್ಲಿ ಸಾರ್ವಜನಿಕ ಪ್ರಸಾರ ಸೇವೆಗಳಿಗೆ ಪ್ರವೇಶವನ್ನು ಹೆಚ್ಚಿಸುತ್ತವೆ. ನಂತರ ಪ್ರಧಾನಿ ಮಧುರೈನಲ್ಲಿ ನಡೆಯಲಿರುವ ಎನ್‌ಡಿಎ ರ‍್ಯಾಲಿಯನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ಮಧುರೈನ ತಿರುಪ್ಪರಂಕುಂದ್ರಂನಲ್ಲಿರುವ ಅರುಲ್ಮಿಗು ಸುಬ್ರಮಣ್ಯಸ್ವಾಮಿ ದೇವಾಲಯದಲ್ಲಿ ಪ್ರಧಾನಿ ಪೂಜೆ ಸಲ್ಲಿಸಲಿದ್ದಾರೆ.

<><><>

ಇಸ್ರೇಲ್ ಮತ್ತು ಇರಾನ್ ನಡುವಿನ ಉದ್ವಿಗ್ನತೆ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಇಂದು ೪೪೪ ವಿಮಾನಗಳ ಹಾರಾಟ ರದ್ದಾಗುವ ನಿರೀಕ್ಷೆಯಿದೆ ಎಂದು ನಾಗರಿಕ ವಿಮಾನಯಾನ ಸಚಿವಾಲಯ ಪ್ರಕಟಿಸಿದೆ. ನಾಗರಿಕ ವಿಮಾನಯಾನ ನಿರ್ದೇಶನಾಲಯ- ಡಿಜಿಸಿಎ, ಪ್ರಯಾಣಿಕರ ಸುರಕ್ಷತೆ ಮತ್ತು ಕಾರ್ಯಾಚರಣೆಯ ನಿಯಮಗಳ ಅನುಸರಣೆಯನ್ನು ಖಚಿತಪಡಿಸಿಕೊಳ್ಳುವ ನಿಟ್ಟಿನಲ್ಲಿ ವಿಮಾನಯಾನ ಸಂಸ್ಥೆಗಳೊಂದಿಗೆ ನಿಕಟವಾಗಿ ಕಾರ್ಯನಿರ್ವಹಿಸುತ್ತಿದೆ ಎಂದು ಸಚಿವಾಲಯ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ತಿಳಿಸಿದೆ. ಇರಾನ್ ಮತ್ತು ಮಧ್ಯಪ್ರಾಚ್ಯದ ಕೆಲವು ಭಾಗಗಳ ಮೇಲಿನ ವಾಯುಪ್ರದೇಶದ ನಿರ್ಬಂಧಗಳಿಂದಾಗಿ, ನಿನ್ನೆ ೪೧೦ ವಿಮಾನಗಳನ್ನು ರದ್ದುಗೊಳಿಸಲಾಗಿದೆ ಮತ್ತು ೪೪೪ ವಿಮಾನಗಳನ್ನು ಇಂದು ರದ್ದುಗೊಳಿಸುವ ನಿರೀಕ್ಷೆಯಿದೆ. ವಿಮಾನ ನಿಲ್ದಾಣಕ್ಕೆ ಹೋಗುವ ಮೊದಲು ವಿಮಾನಯಾನ ಸಂಸ್ಥೆಗಳೊಂದಿಗೆ ಪ್ರಯಾಣಿಕರು ತಮ್ಮ ಹಾರಾಟದ ಸ್ಥಿತಿಯನ್ನು ಪರಿಶೀಲಿಸಲು ಸೂಚಿಸಲಾಗಿದೆ.

<><><>

ಇರಾನ್‌ನಲ್ಲಿ ಅಮೆರಿಕ-ಇಸ್ರೇಲಿ ವಾಯುದಾಳಿಯಿಂದಾಗಿ ಉಂಟಾಗಿರುವ ಪ್ರಾದೇಶಿಕ ಪರಿಸ್ಥಿತಿಯನ್ನು ಗಮನದಲ್ಲಿಟ್ಟುಕೊಂಡು ಹೊರಡಿಸಲಾದ ಸಲಹೆಗಳನ್ನು ಪಾಲಿಸುವಂತೆ ಪಶ್ಚಿಮ ಏಷ್ಯಾದಲ್ಲಿರುವ ಭಾರತೀಯ ರಾಯಭಾರ ಕಚೇರಿಗಳು ತಮ್ಮ ಪ್ರಜೆಗಳನ್ನು ಒತ್ತಾಯಿಸಿವೆ. ಭಾರತೀಯ ಪ್ರಜೆಗಳು ಅತ್ಯಂತ ಎಚ್ಚರಿಕೆಯಿಂದ ವರ್ತಿಸುವಂತೆ, ಅಧಿಕೃತ ಸಲಹೆಗಳನ್ನು ಪಾಲಿಸುವಂತೆ ಮತ್ತು ಅನಗತ್ಯ ಚಲನೆಯನ್ನು ತಪ್ಪಿಸುವಂತೆ ರಾಯಭಾರ ಕಚೇರಿಗಳು ಸೂಚಿಸಿವೆ. ತುರ್ತು ಸಮಯದಲ್ಲಿ ಸಕಾಲಿಕ ಸಹಾಯವನ್ನು ಒದಗಿಸಲು ರಾಯಭಾರ ಕಚೇರಿಗಳು

ಸಹಾಯವಾಣಿ ಸಂಖ್ಯೆಗಳು ಮತ್ತು ಇಮೇಲ್ ಐಡಿಗಳನ್ನು ಸಹ ಸಕಾಲಿಕವಾಗಿ ನೀಡಿವೆ. ಇಸ್ರೇಲ್‌ನಲ್ಲಿ ತುರ್ತು ಸಂದರ್ಭದಲ್ಲಿ, ರಾಯಭಾರ ಕಚೇರಿಯ ಜನರು ಸಹಾಯವಾಣಿ, +೯೭೨-೫೪-೭೫೨೦೭೧೧ ಮತ್ತು +೯೭೨-೫೪-೨೪೨೮೩೭೮ ಅಥವಾ cons1.telaviv@mea.gov.in. ಗೆ ಇಮೇಲ್ ಮೂಲಕ ಸಂಪರ್ಕಿಸಬಹುದು. ಟೆಹ್ರಾನ್‌ನಲ್ಲಿರುವ ಭಾರತೀಯ ರಾಯಭಾರ ಕಚೇರಿಯು ತುರ್ತು ಸಂಪರ್ಕ ಸಂಖ್ಯೆಗಳನ್ನು ಸಹ ನೀಡಿದೆ: +೯೮೯೧-೨೮೧೦-೯೧೧೫, +೯೮೯೧-೨೮೧೦-೯೧೦೯, +೯೮೯೧-೨೮೧೦-೯೧೦೨ ಮತ್ತು +೯೮೯೯-೩೨೧೭-೯೩೫೯. ಅಬುಧಾಬಿಯಲ್ಲಿರುವ ಭಾರತೀಯ ರಾಯಭಾರ ಕಚೇರಿಯ ಟೋಲ್ ಫ್ರೀ ಸಂಖ್ಯೆ ೮೦೦-೪೬೩೪೨, ವಾಟ್ಸಾಪ್ ಸಂಖ್ಯೆ +೯೭೧೫೪೩೦೯೦೫೭೧ ಮೂಲಕವೂ ಸಂಪರ್ಕಿಸಬಹುದು.

<><><>

ಮಹಾರಾಷ್ಟ್ರದ ನಾಗ್ಪುರ ಜಿಲ್ಲೆಯ ಸ್ಫೋಟಕ ಕಾರ್ಖಾನೆಯಲ್ಲಿಂದು ಸಂಭವಿಸಿದ ಭಾರಿ ಸ್ಫೋಟದಲ್ಲಿ ಕನಿಷ್ಠ ೧೭ ಜನರು ಮೃತಪಟಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ. ಪ್ರಧಾನಮಂತ್ರಿ ಕಚೇರಿ ದುರಂತದ ಬಗ್ಗೆ ತೀವ್ರ ದುಃಖ ವ್ಯಕ್ತಪಡಿಸಿದ್ದು, ಸಂತ್ರಸ್ತರಿಗೆ ಆರ್ಥಿಕ ನೆರವು ಘೋಷಿಸಿದೆ. ಈ ಕುರಿತು ಸಾಮಾಜಿಕ ಮಾಧ್ಯಮದಲ್ಲಿ ಪ್ರಧಾನಿ ನರೇಂದ್ರ ಮೋದಿ ಘಟನೆಗೆ ತೀವ್ರ ದುಃಖ ವ್ಯಕ್ತಪಡಿಸಿದ್ದು, ಸಂತಾಪ ಸೂಚಿಸಿದ್ದಾರೆ. ಗಾಯಾಳುಗಳು ಶೀಘ್ರವಾಗಿ ಚೇತರಿಸಿಕೊಳ್ಳಬೇಕೆಂದು ಪ್ರಾರ್ಥಿಸಿದ್ದಾರೆ. ಮೃತರ ಪ್ರತಿಯೊಬ್ಬ ಸಂಬಂಧಿಕರಿಗೆ ಪ್ರಧಾನಮಂತ್ರಿ ರಾಷ್ಟ್ರೀಯ ಪರಿಹಾರ ನಿಧಿಯಿಂದ ೨ ಲಕ್ಷ ರೂಪಾಯಿ ಹಾಗೂ ಗಾಯಾಳುಗಳಿಗೆ ೫೦ ರೂಪಾಯಿ ಪರಿಹಾರ ನೀಡುವುದಾಗಿ ಪಿಎಂಒ ತಿಳಿಸಿದೆ.

<><><>

ಪಶ್ಚಿಮ ಏಷ್ಯಾದಲ್ಲಿ ನಡೆಯುತ್ತಿರುವ ಬೆಳವಣಿಗೆಗಳಿಂದಾಗಿ ತಮ್ಮ ವೀಸಾ ವಿಸ್ತರಣೆ ಅಥವಾ ತಮ್ಮ ವಾಸ್ತವ್ಯವನ್ನು ಕ್ರಮಬದ್ಧಗೊಳಿಸಲು ಸಹಾಯದ ಅಗತ್ಯವಿರುವ ಭಾರತದಲ್ಲಿರುವ ಎಲ್ಲಾ ವಿದೇಶಿ ಪ್ರಜೆಗಳಿಗೆ ವಿದೇಶಾಂಗ ಸಚಿವಾಲಯ ಸಲಹೆ ನೀಡಿದೆ. ವಿದೇಶಿಯರು ಈ ಕುರಿತು ಹತ್ತಿರದ ವಿದೇಶಿಯರ ಪ್ರಾದೇಶಿಕ ನೋಂದಣಿ ಕಚೇರಿ - ಎಫ್‌ಆರ್‌ಆರ್‌ಒ ಅನ್ನು ಸಂಪರ್ಕಿಸಬಹುದು ಎಂದು ಸಚಿವಾಲಯ ತನ್ನ ಸಲಹೆಯಲ್ಲಿ ತಿಳಿಸಿದೆ. ಸಹಾಯ ಬಯಸುವವರು ಎಫ್‌ಆರ್‌ಆರ್‌ಒ ನ https://boi.gov.in/. ಅನ್ನು ಸಂಪರ್ಕಿಸಬಹುದಾಗಿದೆ.

<><><>

ಇರಾನ್‌ನ ಸರ್ವೋಚ್ಚ ನಾಯಕ ಅಯತೊಲ್ಲಾ ಖಮೇನಿ ಹತ್ಯೆಯು, ಇರಾನ್‌ನ ನಾಗರಿಕರಿಗೆ ಮತ್ತು ಅಮೆರಿಕನ್ನರಿಗೆ ನ್ಯಾಯ ನೀಡಿದೆ ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹೇಳಿದ್ದಾರೆ. ಟ್ರೂತ್ ಸೋಷಿಯಲ್‌ನಲ್ಲಿನ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಅವರು, ಟ್ರಂಪ್ ಇರಾನಿನ ಜನತೆ ತಮ್ಮ ದೇಶವನ್ನು ಮರಳಿ ಪಡೆಯಲು ಇದು ಏಕೈಕ ದೊಡ್ಡ ಅವಕಾಶ ಎಂದು ತಿಳಿಸಿದ್ದಾರೆ. ಅಮೆರಿಕದ ಐಆರ್‌ಜಿಸಿ, ಮಿಲಿಟರಿ ಮತ್ತು ಇತರ ಭದ್ರತಾ ಹಾಗೂ ಪೊಲೀಸ್ ಪಡೆಗಳು ಇನ್ನು ಮುಂದೆ ಹೋರಾಡಲು ಬಯಸುವುದಿಲ್ಲ. ಐಆರ್‌ಜಿಸಿ ಮತ್ತು ಪೊಲೀಸ್ ಇರಾನಿನ ದೇಶಪ್ರೇಮಿಗಳೊಂದಿಗೆ ಶಾಂತಿ ಪುನಃಸ್ಥಾಪಿಸಲು ಒಟ್ಟಾಗಿ ಕೈಜೋಡಿಸಲಿದೆ ಎಂದು ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹೇಳಿದ್ದಾರೆ.

<><><>

ಟೆಹ್ರಾನ್ ಮೇಲೆ ಅಮೆರಿಕ ತೀವ್ರ ದಾಳಿ ನಡೆಸಲಿದೆ ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಎಚ್ಚರಿಕೆ ನೀಡಿದ್ದಾರೆ. ಹಿಂದೆಂದೂ ಕಾಣದಷ್ಟು ತೀವ್ರವಾಗಿ ಇಂದು ದಾಳಿ ನಡೆಸುವುದಾಗಿ ಇರಾನ್ ಬೆದರಿಕೆ ಹಾಕಿದೆ. ಇರಾನ್ ದಾಳಿ ಮಾಡದಿರುವುದು ಉತ್ತಮ, ಒಂದೊಮ್ಮೆ ಇರಾನ್ ದಾಳಿ ನಡೆಸಿದರೆ, ಅಮೆರಿಕವು ಸಹ ಹಿಂದೆಂದೂ ನೋಡಿರದ ರೀತಿ ಇರಾನ್ ಮೇಲೆ ದಾಳಿ ನಡೆಸಲಿದೆ ಎಂದು ಟ್ರೂತ್ ಸೋಶಿಯಲ್‌ನ ಪೋಸ್ಟ್‌ನಲ್ಲಿ ಟ್ರಂಪ್ ತಿಳಿಸಿದ್ದಾರೆ. ಇರಾನ್ ತನ್ನ ಸರ್ವೋಚ್ಚ ನಾಯಕ ಅಯತೊಲ್ಲಾ ಖಮೇನಿ ಹತ್ಯೆಗೆ ಪ್ರತೀಕಾರ ತೀರಿಸಿಕೊಳ್ಳುವುದಾಗಿ ಪ್ರತಿಜ್ಞೆ ಮಾಡಿ, ಅಮೆರಿಕ ಮತ್ತು ಇಸ್ರೇಲ್ ನೆಲೆಗಳ ಮೇಲೆ ಹೊಸ ದಾಳಿಗಳನ್ನು ನಡೆಸಿದ ನಂತರ ಟ್ರಂಪ್ ಈ ಹೇಳಿಕೆಗಳನ್ನು ನೀಡಿದ್ದಾರೆ.

<><><>

ಅರುಣ್ ಜೇಟ್ಲಿ ಕ್ರೀಡಾಂಗಣದಲ್ಲಿಂದು ನಡೆಯಲಿರುವ ಐಸಿಸಿ ಪುರುಷರ ಟಿ-೨೦ ವಿಶ್ವಕಪ್ ಕ್ರಿಕೆಟ್‌ನ ಸೂಪರ್ ೮ರ ಹಂತದ ಗುಂಪು-೧ ರ ಪಂದ್ಯದಲ್ಲಿ ದಕ್ಷಿಣ ಆಫ್ರಿಕಾ ಜಿಂಬಾಬ್ವೆಯನ್ನು ಎದುರಿಸಲಿದೆ. ಪಂದ್ಯ ಮಧ್ಯಾಹ್ನ ೩ ಗಂಟೆಗೆ ಪ್ರಾರಂಭವಾಗಲಿವೆ. ಈಡನ್ ಗಾರ್ಡನ್ಸ್‌ನಲ್ಲಿಂದು ನಡೆಯಲಿರುವ ಅಂತಿಮ ಸೂಪರ್ ೮ರ ಮತ್ತೊಂದು ಪಂದ್ಯದಲ್ಲಿ ಭಾರತ ಹಾಗೂ ವೆಸ್ಟ್ ಇಂಡೀಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ಸಂಜೆ ೭ ಗಂಟೆಗೆ ಆರಂಭವಾಗಲಿದೆ. ಈ ಫಲಿತಾಂಶವು ಪಂದ್ಯಾವಳಿಯಲ್ಲಿ ಭಾರತದ ಭವಿಷ್ಯವನ್ನು ನಿರ್ಧರಿಸಲಿದೆ. ಶ್ರೀಲಂಕಾದ

ಪಲ್ಲೆಕೆಲೆಯಲ್ಲಿ ನಿನ್ನೆ ರಾತ್ರಿ ನಡೆದ ಸೂಪರ್ ೮ರ ಹಂತದ ಗುಂಪು -೨ರ ಪಂದ್ಯದಲ್ಲಿ ಶ್ರೀಲಂಕಾ ವಿರುದ್ಧ ಐದು ರನ್‌ಗಳ ಜಯ ಸಾಧಿಸಿದೆ. ಆದರೂ ಪಾಕಿಸ್ತಾನ ಸೆಮಿಫೈನಲ್ ತಲುಪುವ ಅರ್ಹತೆಯಿಂದ ವಂಚಿತವಾಗಿದೆ. ಟಿ-೨೦ ವಿಶ್ವಕಪ್‌ನ ಸೆಮಿಫೈನಲ್ ಪಂದ್ಯಗಳು ಈ ತಿಂಗಳ ೪ ಮತ್ತು ೫ ರಂದು ನಡೆಯಲಿದ್ದು, ಫೈನಲ್ ಪಂದ್ಯ ಮಾರ್ಚ್ ೮ ರಂದು ನಡೆಯಲಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>